ಪರಾ.—ಜೋಡೀದಾರರುಗಳಿಂದಲಾಗಲಿ ಯಾ ಕಾಯಂಗುತ್ತಾದಾರರುಗಳಿಂದ ಆಗಲಿ ಬಾಧ್ಯತೆ ಮೂಲಕ ಇವರುಗಳಿಗೆ ಹಿಂದೆ ಯಿದ್ದವರಿಂದಾಗಲಿ ಉಂಟು ಮಾಡಲ್ಪಟ್ಟ ತಮಾಂ ಹಿಡುವಳಿಗಾಗಲಿ ದೇಣೀಗಳಿಗಾಗಲಿ ಮತ್ತು ಹಕ್ಕುಗಳಿಗಾಗಲಿ ಅಥವಾ ಮತ್ಯಾವ ಸಂಬಂಧಗಳಿಗಾಗಲಿ ಸದರೀ ಹರಾಜು ವಳಪಟ್ಟಿರುವದಿಲ್ಲ.

ಸಿ. ಮಾದಯ್ಯ,
ಡೆಪ್ಯುಟಿ ಕಮ್ಮಿಷನರ್.

ನೋಟಿಫಿಕೇಷ್ಕ.

1ನೇ ಸೆಪ್ಟಂಬರ್ 1890.

ಈ ಕೆಳಗೆ ನಮೂದು ಮಾಡಲ್ಪಟ್ಟಿರುವ ಆನೆಯು ಮಾರಲ್ಪಡುತ್ತದೆ. ಆದ್ದರಿಂದ ಈ ಕೆಳಗೆ ರುಜು ಮಾಡಿರುವವರಿಗೆ ಕೂಡ್ಲೇ ಬರದುಕೊಳ್ಳತಕ್ಕದ್ದು. ಈ ಆನೆಯನ್ನು ಮೈಸೂರು ತಾಲ್ಲೂಕು ಚಟ್ಟನಹಳ್ಳಿ ಯಲ್ಲಾಗಲಿ ಅಥವಾ ಹೆಗ್ಗಡದೇವನ ಕೋಟೆ ತಾಲ್ಲೂಕು ಹಂಪಾಪುರ ಅಥವಾ ಕಾರಾಪುರದಲ್ಲಾಗಲಿ ನೋಡಬಹುದು.

ಆನೆ ಹೆಸರು.	ಜಾತಿ.	ಯತ್ತರ.		ಹಿಡಿಯಲ್ಪಟ್ಟ ತಾರೀಖು.
		ಅಡಿ.	ಅಂಗಲ	
ಕಲ್ಯಾಣಿ	ಹೆಂಣು	7	4	28—6—86

ಪರಾ.—ಈ ಆನೆಯು ಚನ್ನಾಗಿ ತಯಾರ್ಮಾಡಲ್ಪಟ್ಟಿದೆ ಮತ್ತು ವೊಳ್ಳೆ ಆರೋಗ್ಯ ಸ್ಥಿತಿಯಲ್ಲಿದೆ. ಈ ಆನೆಯು 1887ನೇ ಇಸವಿಲಾಗಾಯತು ಹೊಸ ಆನೆಗಳನ್ನು ತಯಾರ್ಮಾಡಲು ವುಪಯೋಗಿಸಲ್ಪಡುತ್ತಾ ಇದೆ.

ಬಿ. ರಾಮಸ್ವಾಮಿ ಐಯ್ಯರ್,
ಅಸಿಸ್ಟೆಂಟ್ ಕ್ಕಸರವೇಟರ್ ಆಫ್ ಮೈಸೂರ್.

ಗವರ್ಮೆಂಟ್ ತಯಾರೀ ಬಾಬತು ಸಿಂಕೋನಾ ಫೆಬ್ರಿಫ್ಯೂಜ್ ಎಂಬ ಔಷಧ.

ಈ ಔಷಧವು, ಕ್ವಿನೈನ್‌ಗೆ ಬದಲಾಗಿ ಉಪಯೋಗಿಸತಕ್ಕ ಬಹಳ ಯೋಗ್ಯವಾದ ಔಷಧವಾಗಿರುತ್ತೆ. ಜನಗಳಿಗಾಗಿ ವ ಧರ್ಮಾರ್ಥವಾಗಿ ಗವರ್ಮೆಂಟ್ ಆಫಿಸರಿಗಳು ಕೊಂಡು ಕೊಳ್ಳಬಹುದು, ಬಂದು ಸಲಕ್ಕೆ ಇಪ್ಪತ್ತು ಪೌಂಡುಗಳು ತಗದುಕೊಳ್ಳುವ ಯಾವ ಮನುಷ್ಯನಾದರೂ ಕಲ್‌ಕತ್ತೆಯಲ್ಲಿ ಬೊಟಾನಿಕಲ್ ಗಾರ್ಡನ್ ಸೂಪರಿಂಟೆಂಡೆಂಟರ ದೆಕೆಯಿಂದ ಇದರಡಿ ಕಂಡ ದರಗಳ ಪ್ರಕಾರ ನಗದು ಕೊಟ್ಟೇ ಕೊಂಡುಕೊಳ್ಳಬೇಕಾಗಿರುತ್ತೆ. ನಾಲ್ಕು ಔನ್ಸ್ ಔಷಧವುಳ್ಳ ತಗರದ ಡಬ್ಬೀ ಬಂದಕ್ಕೆ ರೂ. 3—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 7—4—0; ಬಂದು ಪೌಂ ಔಷಧವುಳ್ಳ ಡಬ್ಬಿಗೆ ರೂ. 14—0—0; ಬೊಟಾನಿಕಲ್ ಗಾರ್ಡನ್ ಸೂಪರ್ಟಿಂಟೆಂಡೆಂಟರು ಇದರಡಿ ಕಂಡ ದರ ಪ್ರಕಾರ ನಗದಿಗೇನೇ ಸರ್ವಜನಗಳಿಗೂ ಒದಗಿಸಬಹುದು; ನಾಲ್ಕು ಔನ್ಸ್‌ವುಳ್ಳ ಡಬ್ಬಿ ಬಂದಕ್ಕೆ ರೂ. 4—14—0; ಎಂಟು ಔನ್ಸ್‌ವುಳ್ಳ ಡಬ್ಬಿಗೆ ರೂ. 9—4—0; ಬಂದು ಪೌಂವುಳ್ಳ ಡಬ್ಬಿಗೆ 17 ರೂ. 8 ಆಣೆ; ಈ ಔಷಧವು ಕಲ್‌ಕತ್ತೆಯಲ್ಲಿ ಮುಖ್ಯ ಮುಖ್ಯ ಯೂರೋಪಿಯರ್ ವ ನೇಟಿವ್ ಮದ್ದಿನಂಗಡಿಯವರಿಂದ ಮಾರಲ್ಪಡುತ್ತೆ, ಸದರೀ ಕಿಮ್ಮತಿನೊಂದಿಗೆ ದರ 4 ಔನ್ಸ್ ತಗರದ ಡಬ್ಬಿಗೆ 4 ಆಣೆಯೂ, 8 ಔನ್ಸ್ ತಗರದ ಡಬ್ಬಿಗೆ 8 ಆಣೆ ಟಪ್ಪಾಲ್ ಹಾಸಲೂ, ಬಂದು ಪೌಂ ಡಬ್ಬಿಗೆ ಹನ್ನೆರಡು ಆಣೆ ಹಾಸಲೂ ಕೊಡಬೇಕು.

ಮೈಸೂರ ಗೆಜೆಟ್ ಚಂದಾ ದರ ವಗೈರ.

ತಾರೀಖು 26ನೇ ಜನವರಿ 1889.

ಮೈಸೂರು ಗೆಜೆಟ್ ಬೆಂಗಳೂರಲ್ಲಿ ಛಾಪಿಸಲ್ಪಡುತ್ತೆ. ಮತ್ತು ಸದರೀ ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟೀಸ್ ಮುಂತಾದವುಗಳು ಬೆಂಗಳೂರಲ್ಲಿರುವ ಮೈಸೂರು ಗೆಜೆಟ್ ಕಂಪೈಲರವರ ಹೆಸರಿಗೆ ವಿಳಾಸ ಬರೆಯಲ್ಪಟ್ಟು ರವಾನಿಸಲ್ಪಡತಕ್ಕದ್ದು.

	ಚಂದಾ.	ಟಪ್ಪಾಲ್ ಹಾಸಲು ಮೈಸೂರು ಕ್ಕೆಮೆ ಶಿವಾಯಿ ಇತರ ಸ್ಥಳಗಳಿಗೆ.
	ರೂ. ಆ.	ರೂ. ಆ.
ಇಂಗ್ಲೀಷು ಅಥವಾ ಕನ್ನಡ ಕಾಪಿ 1ಕ್ಕೆ 12 ತಿಂಗಳಿಗೆ	3 8	1 12
ಇಂಗ್ಲೀಷು ಮತ್ತು ಕನ್ನಡ ಸುದಾ 12 ತಿಂಗಳಿಗೆ	7 0	3 8

ಫಸ್ಟ್ ಮೊಹೇ ಯಾ ಕ್ವಾರ್ಟರಿಗೆ ದಾವಾಷಾಯಿ ಪ್ರಕಾರ ದರಗಳು.

ಚಾಲ್ತಿ ವರುಷದ ಗೆಜೆಟ್ ಕಾಪಿ 1ಕ್ಕೆ ರೆಗ್ಯುಲೇರ್ಸ್ ಯಾ ಆಕ್ಟ್ಯುಗಳು ಯಾವದೂ ಇಲ್ಲದಿದ್ದರೆ. 0 8

ಹಿಂದಿನ ವರುಷದ ಗೆಜೆಟ್ ಕಾಪಿಗಳಿಗೆ ಚಾರ್ಜು ಕೇಳಿ ತಿಳಿದುಕೊಳ್ಳಬಹುದು.

ಸಿವಿಲ್ ಕೋರ್ಟಿನಿಂದ ಕೊಡಲ್ಪಡುವ, 1860ನೇ ಇಸವಿ XXVIIನೇ ಆಕ್ಟ್ಯು ಅನುಸರಿಸಿ ಸರ್ಟಿಫಿಕೇಟ್ ಬಗ್ಯೆ ನೋಟಿಸುಗಳು:—

ಮೊದಲನೇ ದಫಾ ಫಾಯಿಷ್ ಮಾಡತಕ್ಕ ಬಗ್ಯೆ (ಇಂಗ್ಲೀಷು ಅಥವಾ ಕನ್ನಡ) .. 2 8

ಎರಡನೇ ಸಲ ವ ಆ ತರುವಾಯ ಪ್ರತಿ ಆವರ್ತಿಗೂ ಡಿಟೋ 1 4

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 347ನೇ ಸೆಕ್ಷನ್ ಅನುಸರಿಸಿ ದಿವಾಳೀ ಅಪ್ಲಿಕೇಷ್ಟಗಳ ಬಗ್ಯೆ ನೋಟಿಸುಗಳಿಗೆ:—

ಮೊದಲನೇ ಸಲಕ್ಕೆ 5 0

ಎರಡನೇ ವ ಆ ತರುವಾಯ ಪ್ರತಿ ದಫಾಕ್ಕೆ 2 8

ಸಿವಿಲ್ ಪ್ರೊಸಿಜ್ಯೂರ್ ಕೋಡಿನ 354ನೇ ಸೆಕ್ಷನ್ ಅನುಸರಿಸಿ ಸಿವಿಲ್ ಕೋರ್ಟುಗಳಿಂದ ಕೊಡಲ್ಪಡುವ ದಿವಾಳೀ ಹುಕ್ಕುಂಗಳು ಬಗರ್ ಚಾರ್ಜ್ ಪ್ರಕಟಿಸಲ್ಪಡುತ್ತವೆ.

ಡ್ಯೂಪ್ಲಿಕೇಟ್ ಕಾಪೀಪಟ್ಟೆ ವಗೈರೇ ಕೊಡುವ ಬಗ್ಯೆ ರೆವಿನ್ಯೂ ಆಫಿಸರ್‌ಗಳು ಕೊಡುವ ನೋಟಿಸ್‌ಗಳಿಗೆ :—

ಮೊದಲನೇ ಸಲಕ್ಕೆ .. ಪುಟ 1ಕ್ಕೆ .. 10 0

ಎರಡನೇ ಸಲ ವ ಆ ತರುವಾಯ ಪ್ರತಿ ಸಲಕೂ „ .. 5 0

ಖಾಸಗೀ ಪ್ರಕಟನೆಗಳಿಗೆ ಈ ಕೆಳಗೆ ಕಾಣಿಸಲ್ಪಡುವ ದರಗಳಪ್ರಕಾರ ಚಾರ್ಜ್ ಮಾಡಲ್ಪಡುತ್ತೆ:—

ಮೊದಲನೇ ದಫಾ ಇಂಗ್ಲೀಷ್ ಅಥವಾ ಕನ್ನಡಕ್ಕೆ ಪಟ್ಟಿ 1ಕ್ಕೆ .. 0 8

ಎರಡನೇ ದಫಾ ಡಿಟೋ ಡಿಟೋ .. 0 6

ಮೂರನೇ ವ ಆ ತರುವಾಯ ಪ್ರತಿ ಸಲಕ್ಕೆ 0 4

ಷರಾ.—ಚಂದಾ ವಗೈರೇ ಬಗ್ಯೆ ಪೋಸ್ಟೇಜ್ ಲೇಬಿಲ್ಲು ಕಳುಹಿಸಲ್ಪಟ್ಟಾಗ ರೂಪಾಯಿಗೆ ಎಂದಾಣೆ ಯಂತೆ ಜಾಸ್ತೀ ಲೇಬಿಲ್ಲು ಕಳುಹಿಸಲ್ಪಡತಕ್ಕದ್ದು.

ಗವರ್ನಮೆಂಟ್ ಆರ್ಡರ್ ಪ್ರಕಾರ ತಮಾಂ ಚಂದಾ ವೊಬಲಗುಗಳೂ, ಪ್ರಕಟನೇ ಚಾರ್ಜುಗಳೂ ಮುಂಗಡವಾಗಿ ಪಾವತಿ ಮಾಡಲ್ಪಡಬೇಕು.

ಸರ್ಕಾರಿಯಾಗಿ ಗೆಜೆಟ್ ಪಡೆಯುವ ಬಗ್ಯೆದ ದರಖಾಸ್ತುಗಳು ಮೈಸೂರು ದಿವಾನರವರ ಚೀಫ್ ಸೆಕ್ರಿಟರಿಯವರಿಗೆ ಕಳುಹಿಸಲ್ಪಡತಕ್ಕದ್ದು.

ಗೆಜೆಟ್ ತಲಪಲಿಲ್ಲವೆಂಬ ಫಿರ್ಯಾದ್‌ಗಳು ಇದರಡಿ ರುಜೂ ಮಾಡಿರುವವರಿಗೆ ಅದು ತಲಪಬೇಕಾದ ತಾರೀಖು ಲಗಾಯತು ಒಂದು ವಾರದ ವೊಳಗಾಗಿ ತಿಳಿಸಲ್ಪಡಬೇಕು.

ಮೈಸೂರು ಗೆಜೆಟ್ಟಿನಲ್ಲಿ ಛಾಪಿಸಲು ಉದ್ದೇಶಿಸಲ್ಪಟ್ಟ ತಮಾಂ ನೋಟಿಸ್ ವ ಇಸ್ತಿಹಾರ್‌ನಾಮೆಗಳು ಆ ಗೆಜೆಟ್ ಛಾಪಿಸಲ್ಪಡುವ ಹಿಂದಿನ ಗುರುವಾರ ದಿವಸ ಸಾಯಂಕಾಲ 5 ಘಂಟೆ ವಳಗಾಗಿ ಕಂಪ್ಟ್ರೊಲರ್ ಆಫಿಸಿಗೆ ತಲಪಬೇಕಾಗಿರುತ್ತೆ, ಆ ತರುವಾಯ ಕಳುಹಿಸಲ್ಪಡುವ ಯಾ ತಲಪುವ ಕಾಗದಗಳು, ಕೆಲಸ ನಿರ್ವಾಹಕ್ಕೆ ಅನುಕೂಲವಾಗಿದ್ದರೇನೇ ಹೊರತು ಅನ್ಯಥಾ ಅದೇ ವಾರದ ಗೆಜೆಟ್ಟಿನಲ್ಲಿ ಛಾಪಿಸಲ ಡುತ್ತೆಂಬ ಖಾತರ್ ಯಿಲ್ಲ.

ಟಿ. ಟಿ. ಲೆನಾರ್ಡ್,
ಮೈ. ಗೆ. ಕಂಪ್ಟ್ರೊಲರ್.

Mysore Government Central Press, Bangalore.—1890.